[illegible]

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ	:	769
ವಿಧಾನ ಪರಿಷತ್ತಿನ ಸದಸ್ಯರ ಹೆಸರು	:	ಶ್ರೀಮತಿ ಎಸ್. ವೀಣಾ ಅಚ್ಚಯ್ಯ (ವಿಧಾನಸಭೆಯಿಂದ ಚುನಾಯಿತರಾದವರು)
ಉತ್ತರಿಸಬೇಕಾದ ದಿನಾಂಕ	:	20.12.2021
ಉತ್ತರಿಸುವ ಸಚಿವರು	:	ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
(ಅ)	ಕೊಡಗು ಜಿಲ್ಲೆಯಲ್ಲಿ 2021-22ನೇ ಸಾಲಿನಲ್ಲಿ ಪಡಿತರ ಚೀಟಿ ವಿತರಣೆ ಮಾಡುವಂತೆ ಕೋರಿ ಇದುವರೆಗೂ ಎಷ್ಟು ಅರ್ಜಿಗಳು ಸಲ್ಲಿಕೆಯಾಗಿವೆ ಹಾಗೂ ಇದುವರೆಗೆ ಎಷ್ಟು ಪಡಿತರ ಚೀಟಿ ವಿತರಣೆ ಮಾಡಲಾಗಿದೆ;	ಕೊಡಗು ಜಿಲ್ಲೆಯಲ್ಲಿ 2021-22 ನೇ ಸಾಲಿನಲ್ಲಿ ಪಡಿತರ ಚೀಟಿಯನ್ನು ಕೋರಿ 3110 ಅರ್ಜಿಗಳು ಸ್ವೀಕೃತವಾಗಿದ್ದು, 01 ಪಡಿತರ ಚೀಟಿಯನ್ನು ವಿತರಿಸಲಾಗಿದೆ.
(ಆ)	ಜಿಲ್ಲೆಯಲ್ಲಿ ಪಡಿತರ ಚೀಟಿ ವಿತರಣೆ ಆಗದೇ ಬಾಕಿ ಇರುವ ಅರ್ಜಿಗಳಷ್ಟು ಹಾಗೂ ಪಡಿತರ ಚೀಟಿ ವಿತರಣೆಯಲ್ಲಿ ಅನಗತ್ಯ ವಿಳಂಬವಾಗುತ್ತಿರಲು ಕಾರಣಗಳೇನು;	ಕೊಡಗು ಜಿಲ್ಲೆಯಲ್ಲಿ ಪಡಿತರ ಚೀಟಿ ಕೋರಿ ಸಲ್ಲಿಸಲಾಗಿರುವ ಅರ್ಜಿಗಳಲ್ಲಿ 3109 ಅರ್ಜಿಗಳು ವಿತರಣೆಗೆ ಬಾಕಿ ಉಳಿದಿವೆ. ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಹೊಸ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಸ್ಥಳ ಪರಿಶೀಲನೆ ಕಾರ್ಯವು ನಿಧಾನವಾಗಿದ್ದು ಮತ್ತು ಈ ಅವಧಿಯಲ್ಲಿ ಬಯೋಮೆಟ್ರಿಕ್ ಬಳಕೆಯನ್ನು ಹಿಂಪಡೆದಿರುವ ಕಾರಣ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.
(ಇ)	ಬಾಕಿ ಇರುವ ಅರ್ಜಿಗಳನ್ನು ಯಾವ ಕಾಲಮಿತಿಯೊಳಗೆ ವಿಲೇವಾರಿ ಮಾಡಲಾಗುವುದು;	ಕೋವಿಡ್-19 ಲಾಕ್‌ಡೌನ್ ಅವಧಿಯಲ್ಲಿ ಹೊಸ ಪಡಿತರ ಚೀಟಿ ಕೋರಿ ಸಲ್ಲಿಸಿರುವ ಅರ್ಜಿಗಳ ಸ್ಥಳ ಪರಿಶೀಲನೆ ಕಾರ್ಯವು ನಿಧಾನವಾಗಿದ್ದು ಮತ್ತು ಈ ಅವಧಿಯಲ್ಲಿ ಬಯೋಮೆಟ್ರಿಕ್ ಬಳಕೆಯನ್ನು ಹಿಂಪಡೆದಿರುವ ಕಾರಣ ಪಡಿತರ ಚೀಟಿಗಳನ್ನು ವಿತರಿಸುವ ಕಾರ್ಯವನ್ನು ತಾತ್ಕಾಲಿಕವಾಗಿ ಸ್ಥಗಿತಗೊಳಿಸಲಾಗಿದೆ.
(ಈ)	ಜಿಲ್ಲೆಯಲ್ಲಿ ಪ್ರಸ್ತುತ ಒಟ್ಟು ಎಷ್ಟು ನ್ಯಾಯಬೆಲೆ ಅಂಗಡಿಗಳ ಮೂಲಕ ಒಟ್ಟು ಎಷ್ಟು ಕುಟುಂಬಗಳಿಗೆ ಎಷ್ಟು ಮೊತ್ತದ	ಕೊಡಗು ಜಿಲ್ಲೆಯಲ್ಲಿ ಒಟ್ಟು 276 ನ್ಯಾಯಬೆಲೆ ಅಂಗಡಿಗಳ ಮೂಲಕ ಒಟ್ಟು 105701 ಅನ್ನಭಾಗ್ಯ ಕುಟುಂಬಗಳಿಗೆ ಪಡಿತರ

	ಪಡಿತರ ವಿತರಣೆಯಾಗುತ್ತಿದೆ? (ವಿವರ ನೀಡುವುದು)	ವಿತರಣೆ ಮಾಡಲಾಗುತ್ತಿದೆ. ಕೊಡಗು ಜಿಲ್ಲೆಯಲ್ಲಿ ಒಟ್ಟು ರಾಷ್ಟ್ರೀಯ ಆಹಾರ ಭದ್ರತಾ ಕಾಯ್ದೆ ಅಡಿ 17994.20 ಕ್ವಿಂಟಾಲ್ ಅಕ್ಕಿ ಮತ್ತು 1911.48 ಕ್ವಿಂಟಾಲ್ ಗೋಧಿಯನ್ನು ವಿತರಿಸಲಾಗುತ್ತಿದೆ. ಹಾಗೂ ಪ್ರಧಾನ ಮಂತ್ರಿ ಗರೀಬ್ ಕಲ್ಯಾಣ ಅನ್ನ ಯೋಜನೆಯಡಿ 16131.30 ಕ್ವಿಂಟಾಲ್ ಅಕ್ಕಿ ವಿತರಣೆಯಾಗುತ್ತಿದೆ.

ಆನಾಸ 307 ಡಿಆರ್‌ಎ 2021 (ಇ-ಆಫೀಸ್)

(ಉಮೇಶ.ವಿ.ಕತ್ತಿ)
ಅರಣ್ಯ ಮತ್ತು ಆಹಾರ, ನಾಗರಿಕ ಸರಬರಾಜು
ಮತ್ತು ಗ್ರಾಹಕರ ವ್ಯವಹಾರಗಳ
ಹಾಗೂ ಕಾನೂನು ಮಾಪನಶಾಸ್ತ್ರ ಇಲಾಖಾ ಸಚಿವರು